# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : (129) + (140)
ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ.ಗೌಡ
(ಪದವೀಧರರ ಕ್ಷೇತ್ರ)
ಡಾ|| ಉಮಾಶ್ರೀ
(ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 08.12.2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಎಷ್ಟು ಕೆ.ಪಿ.ಎಸ್. ಶಾಲೆಗಳಿವೆ; ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಪ್ರಾರಂಭಿಸಲಾಗುವುದು; | ರಾಜ್ಯದಲ್ಲಿ ಪ್ರಸ್ತುತ ಒಟ್ಟು 309 ಕರ್ನಾಟಕ ಪಬ್ಲಿಕ್ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.<br>ಪ್ರಸ್ತುತ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕೆ.ಪಿ.ಎಸ್ ಶಾಲೆಗಳು ಇರುವುದಿಲ್ಲ.<br>2025-26ನೇ ಸಾಲಿನಲ್ಲಿ 900 ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ.<br>ಮುಂದಿನ ದಿನಗಳಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಒಂದು ಕೆ.ಪಿ.ಎಸ್. ಶಾಲೆಯನ್ನು ಹಂತ ಹಂತವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುವುದು. |
| ಆ) | ಕೆ.ಪಿ.ಎಸ್. ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆಯೇ; ಇದ್ದಲ್ಲಿ, ಯಾವಾಗ ಶಿಕ್ಷಕರ ಭರ್ತಿ ಮಾಡಲಾಗುವುದು. | 2025-26ನೇ ಸಾಲಿನಲ್ಲಿ ಈಗಾಗಲೇ ಕಾರ್ಯಾಚರಣೆಯಲ್ಲಿರುವ 309 KPS ಶಾಲೆಗಳಲ್ಲಿ ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವ ತರಗತಿವರೆಗೆ ಒಟ್ಟು 272464 ವಿದ್ಯಾರ್ಥಿಗಳು ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.<br>ಸದರಿ ಕೆ.ಪಿ.ಎಸ್. ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ.<br>ಶಿಕ್ಷಕರ ಕೋರಿಕೆ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಪರಿಪೂರ್ಣವಾಗಿ ಹೆಚ್ಚುವರಿ ಶಿಕ್ಷಕರ ಮರುಹೊಂದಾಣಿಕೆ ಪ್ರಕ್ರಿಯೆಯನ್ನು ತರ್ಕಬದ್ಧಗೊಳಿಸುವ ಮೂಲಕ ಕೆ.ಪಿ.ಎಸ್. ಶಾಲೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಕ್ರಮವಹಿಸಲಾಗುವುದು. |
| ಇ) | ಈ ಶಾಲೆಗಳಲ್ಲಿ ಎಲ್ಲಾ ತರಗತಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ಹಾಗೂ ಕೌಶಲ ಅಭಿವೃದ್ಧಿ ಶಿಕ್ಷಣ ನೀಡಲಾಗುತ್ತಿದೆಯೇ: | ಕೆ.ಪಿಎಸ್. ಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಹಾಗೂ ಸ್ಮಾರ್ಟ್ ಕ್ಲಾಸ್ ಸೌಲಭ್ಯ ಒದಗಿಸಲಾಗಿದೆ. ಹಾಗೂ ಕೆ.ಪಿ.ಎಸ್. ಶಾಲೆಗಳಲ್ಲಿ ಕೌಶಲ ಅಭಿವೃದ್ಧಿ ಶಿಕ್ಷಣ ನೀಡಲಾಗುತ್ತಿದೆ. 2026-27ನೇ ಸಾಲಿನಿಂದ |

| | | |
|---|---|---|
| | | ಎಲ್ಲಾ ಕೆ.ಪಿ.ಎಸ್. ಶಾಲೆಗಳಲ್ಲಿ , 1ನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, ಭವಿಷ್ಯದ ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಕ್ರಮವಹಿಸಲಾಗುತ್ತಿದೆ. ಇದರಲ್ಲಿ ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುವುದು |
| **ಈ)** | ತುಮಕೂರು ಜಿಲ್ಲೆಯಲ್ಲಿ ಎಷ್ಟು ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ; ಮತ್ತು ಪ್ರಸ್ತುತ ಎಷ್ಟು ಶಾಲೆಗಳನ್ನು ಉನ್ನತೀಕರಿಸಲಾಗುವುದು; (ತಾಲ್ಲೂಕುವಾರು ವಿವರ ನೀಡುವುದು): | ತುಮಕೂರು ಜಿಲ್ಲೆಯಲ್ಲಿ 2018-19 ರಿಂದ 2024-25 ರವರೆಗೆ ಒಟ್ಟು 11 ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.<br>2025-26ನೇ ಸಾಲಿನಲ್ಲಿ 09 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.<br>**(ಅನುಬಂಧ-1)** |
| **ಉ)** | ಪ್ರಸ್ತುತ ತುಮಕೂರು ಜಿಲ್ಲೆಯಲ್ಲಿ 50 ಕ್ಕಿಂತಲೂ ಕಡಿಮೆ ವಿದ್ಯಾರ್ಥಿಗಳಿರುವ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು); ಕೆ.ಪಿ.ಎಸ್ ಶಾಲೆಗೆ ವಿಲೀನ ಮಾಡಲು ಉದ್ದೇಶಿಸುವ ಶಾಲೆಗಳ ಸಂಖ್ಯೆ ಎಷ್ಟು ಮತ್ತು ಯಾವುವು; | ಪ್ರಸ್ತುತ ತುಮಕೂರು ಜಿಲ್ಲೆಯಲ್ಲಿ 50 ಕ್ಕಿಂತಲೂ ಕಡಿಮೆ ವಿದ್ಯಾರ್ಥಿಗಳಿರುವ ಶಾಲೆಗಳ ಸಂಖ್ಯೆ: 1659 (ಪಟ್ಟಿಯನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ.)<br><br>ಪ್ರತಿ ಮಗುವೂ ಶಾಲೆಯಲ್ಲಿರಬೇಕು ಮತ್ತು ಚೆನ್ನಾಗಿ ಕಲಿಯಬೇಕು ಎಂಬ ಉದ್ದೇಶದಿಂದ ಅತ್ಯುತ್ತಮ ಶೈಕ್ಷಣಿಕ ಮತ್ತು ಭೌತಿಕ ಸೌಕರ್ಯಗಳು ಮತ್ತು ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ಅತ್ಯುತ್ತಮ ಪಬ್ಲಿಕ್ ಶಾಲೆಯ ನಿದರ್ಶನವನ್ನು ಸ್ಥಾಪಿಸುವುದು ಸುದೀರ್ಘವಾದ ಮತ್ತು ಎಲ್ಲರಿಗೂ ಮನವರಿಕೆಯಾಗುವಂತೆ ಮಾಡುವ ಪ್ರಕ್ರಿಯೆಯಾಗಿದ್ದು, ಈ ಮೂಲಕ ಮಕ್ಕಳ ಶಿಕ್ಷಣದ ಬಗ್ಗೆ ಮಹಾತ್ವಾಕಾಂಕ್ಷೆಯುಳ್ಳ ಪೋಷಕರು ಶಾಲೆಯ ಆಯ್ಕೆಯನ್ನು ನಿರ್ಧರಿಸಲು ಅನುಕೂಲವಾಗುತ್ತದೆ. ಪೋಷಕರು ತಮಗೆ ಹೆಚ್ಚು ಸೂಕ್ತವಾದ ಉತ್ಕೃಷ್ಟ ಶಾಲೆಯನ್ನು ತಮ್ಮ ಇಚ್ಛೆಗೆ ಅನುಗುಣವಾಗಿ ಆಯ್ಕೆ ಮಾಡಿಕೊಳ್ಳಲು ಅವಕಾಶವಿದ್ದು, ಇದರಲ್ಲಿ ಯಾವುದೇ ಬಲವಂತ ಇರುವುದಿಲ್ಲ. |

| | | |
|---|---|---|
| ಊ) | ಕಡಿಮೆ ವಿದ್ಯಾರ್ಥಿಗಳಿರುವ ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳಿಗೆ ವಿಲೀನ ಮಾಡುವುದರಿಂದ ದಿವ್ಯಾಂಗ (ಅಂಗವಿಕಲ) ಮಕ್ಕಳು ಮತ್ತು ದೂರದ ಗ್ರಾಮಗಳಿಗೆ ಸಂಚರಿಸಲು ಸಾಧ್ಯವಾಗದ ಮಕ್ಕಳು ಶಾಲೆ ಬಿಡುವ ಸಾಧ್ಯತೆಯಿದ್ದು; ಇವರಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗುವುದೇ: ಇದರ ಪರಿಹಾರಕ್ಕೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು: | ಪ್ರಸ್ತುತ ಸಣ್ಣ ಶಾಲೆಗಳಲ್ಲಿರುವ ಎಲ್ಲಾ ವಿದ್ಯಾರ್ಥಿಗಳ ಪೋಷಕರು ಮತ್ತು ಎಸ್.ಡಿ.ಎಂ.ಸಿ.ಯವರು ಹೆಚ್ಚಿನ ಭೌತಿಕ ಸೌಲಭ್ಯ ಮತ್ತು ಉತ್ತಮ ಕಲಿಕಾ ಸೌಕರ್ಯಗಳನ್ನು ಹೊಂದಿರುವ ಹತ್ತಿರದ ಕೆ.ಪಿ.ಎಸ್. ಶಾಲೆಗೆ ದಾಖಲಿಸಲು ಎಸ್.ಡಿ.ಎಂ.ಸಿ. ಮತ್ತು ಪೋಷಕರು ತೀರ್ಮಾನಿಸಿದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಉಚಿತ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಯೋಜಿಸಲಾಗಿದೆ. |
| ಋ) | ಪ್ರಸ್ತುತ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆ.ಪಿ.ಎಸ್ ಶಾಲೆಗಳ ಸಂಖ್ಯೆ ಎಷ್ಟು; ಅವುಗಳಿಗೆ ಮಂಜೂರದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಸಿಬ್ಬಂದಿಯೆಷ್ಟು; ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; | ಪ್ರಸ್ತುತ ತುಮಕೂರು ಜಿಲ್ಲೆಯಲ್ಲಿ 11 ಕೆ.ಪಿ.ಎಸ್ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ 573 ಮತ್ತು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ 418. ಖಾಲಿ ಇರುವ 82 ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ.<br>ಶಿಕ್ಷಕರ ಕೋರಿಕೆ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಪರಿಪೂರ್ಣವಾಗಿ ಹೆಚ್ಚುವರಿ ಶಿಕ್ಷಕರ ಮರುಹೊಂದಾಣಿಕೆ ಪ್ರಕ್ರಿಯೆಯನ್ನು ತರ್ಕಬದ್ಧಗೊಳಿಸುವ ಮೂಲಕ ಕೆ.ಪಿ.ಎಸ್. ಶಾಲೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಕ್ರಮವಹಿಸಲಾಗುವುದು. |
| ಎ) | ಕೆ.ಪಿ.ಎಸ್ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಉತ್ತಮ ಕಲಿಕೆ, ಉಜ್ವಲ ಭವಿಷ್ಯ ಎಂಬುದು ಕೆ.ಪಿ.ಎಸ್. ಶಾಲೆಗಳ ಧ್ಯೇಯ ವಾಕ್ಯವಾಗಿದ್ದು, ಪ್ರತಿ ಮಗುವೂ ಶಾಲೆಯಲ್ಲಿರಬೇಕು ಮತ್ತು ಚೆನ್ನಾಗಿ ಕಲಿಯಬೇಕು ಎಂಬ ಮಹತ್ತರ ಉದ್ದೇಶದಿಂದ ರಾಜ್ಯದ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳು ಏಕರೂಪದ ನೀತಿಯನ್ನು ಪಾಲಿಸುವಂತೆ '**ಕರ್ನಾಟಕ ಪಬ್ಲಿಕ್ ಶಾಲಾ ಮಾನಕಗಳು**' ಕೈಪಿಡಿಯನ್ನು ಸಿದ್ಧಪಡಿಸಲಾಗಿದ್ದು, ಅದರಲ್ಲಿ ನಿಗದಿಪಡಿಸಿರುವ ಗುಣಮಟ್ಟದ ಮಾನದಂಡಗಳಂತೆ ಪ್ರತಿ ಶಾಲೆಯಲ್ಲಿ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಅವಶ್ಯಕವಿರುವ ಸಮರ್ಪಕ ಶೈಕ್ಷಣಿಕ ಮತ್ತು ಭೌತಿಕ ಸೌಕರ್ಯಗಳನ್ನು ಒದಗಿಸಿ ಉನ್ನತೀಕರಿಸಲಾಗುವುದು.<br>LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಅಳವಡಿಸಿಕೊಳ್ಳುವುದು, 6 ರಿಂದ 10ನೇ ತರಗತಿಯವರೆಗೆ ಪ್ರಸ್ತುತ ಇರುವ ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಿ ಮಾಧ್ಯಮವಾರು |

| | | |
|---|---|---|
| | | ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಮತ್ತು ಕ್ರಿಯಾಶೀಲ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳುವುದು, Iನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, VIನೇ ತರಗತಿಯಿಂದ ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ ಮತ್ತು VIIIನೇ ತರಗತಿಯಿಂದ ಮಂಡಳಿ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳನ್ನು ಪ್ರಾರಂಭಿಸಲಾಗುವುದು. ಕೆ.ಪಿ.ಎಸ್. ಶಾಲೆಗಳಲ್ಲಿ LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಮತ್ತು 6 ರಿಂದ 10ನೇ ತರಗತಿಯವರೆಗೆ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಕ್ರಿಯಾಶೀಲ ಉತ್ತಮ ಗುಣಮಟ್ಟದ ಕಲಿಕಾ ಪದ್ಧತಿಗಳನ್ನು ಅಳವಡಿಸಲಾಗುವುದು. ಭವಿಷ್ಯದ ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಕ್ರಮವಹಿಸಲಾಗುತ್ತಿದೆ. ಈ ಶಾಲೆಗಳು ಸಮರ್ಥ ಶಾಲಾ ಮುಖ್ಯಸ್ಥರು ಮತ್ತು ಅರ್ಹ ಶಿಕ್ಷಕರ ಸಂಪೂರ್ಣ ಸಂಪನ್ಮೂಲವನ್ನು ಹೊಂದಲು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಸೂಕ್ತ ತಿದ್ದುಪಡಿಗಳನ್ನು ತರಲಾಗುವುದು ಮತ್ತು ಶಿಕ್ಷಕರ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಈ ಶಾಲೆಗಳನ್ನು ಪ್ರೋತ್ಸಾಹಿಸಲಾಗುವುದು. ಶಿಕ್ಷಕರ ಅಗತ್ಯಕ್ಕೆ ಅನುಗುಣವಾದ ತರಬೇತಿ, ಸಾಮರ್ಥ್ಯ ಅಭಿವೃದ್ಧಿ ಉಪಕ್ರಮಗಳ ಮೂಲಕ ತರಗತಿ ಕಲಿಕೆಯ ಅಭ್ಯಾಸಗಳನ್ನು ಬಲಪಡಿಸಲಾಗುವುದು. ಇದು ಪರಿಣಾಮಕಾರಿ ಶಿಕ್ಷಣ ಶಾಸ್ತ್ರ, ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಸುಧಾರಿಸುತ್ತದೆ.<br>ಪ್ರೌಢಶಾಲಾ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸುವುದು ಹಾಗು 10ನೇ - 12ನೇ ತರಗತಿಯ ಮಂಡಳಿ ಪರೀಕ್ಷೆಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ಕಡೆ ಗಮನ ಹರಿಸಲಾಗಿದೆ. ಪ್ರೌಢ ತರಗತಿಗಳ ಫಲಿತಾಂಶಗಳಿಗೆ ವಿಶೇಷ ಒತ್ತು ನೀಡಲಾಗುವುದು. ಇದರಲ್ಲಿ STEAM ಶಿಕ್ಷಣ, ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುವುದು. AI |

| | | |
|---|---|---|
| | | ಮತ್ತು ಡಿಜಿಟಲ್ ಸಂಪನ್ಮೂಲಗಳನ್ನು ಸಂಯೋಜಿಸುವ ಮೂಲಕ ಹಾಗೂ ಮೂಲಸೌಕರ್ಯವನ್ನು ಸುಧಾರಿಸುವ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ ಶಾಲೆಗಳು ಸಾರ್ವಜನಿಕ ಶಿಕ್ಷಣದ ಪ್ರಗತಿಪರ ಮರುಕಲ್ಪನೆಯನ್ನು ನೀಡುತ್ತದೆ. ಈ ಶಾಲೆಗಳು ಉಚಿತ ಸಾರಿಗೆ ಸೌಲಭ್ಯ ಮತ್ತು ತಾಂತ್ರಿಕ ಸಮ್ಮಿಳಿತದ ಕಲಿಸುವಿಕೆಯೊಂದಿಗೆ ಮಕ್ಕಳ ಶಿಕ್ಷಣ ಗುಣಮಟ್ಟವನ್ನು ಉತ್ತಮಪಡಿಸಲಾಗುವುದು. |

**ಇಪಿ 357 ಯೋಸಕ 2025**

(ಎಸ್.ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಅನುಬಂಧ-1

ಸಮಗ್ರ ಶಿಕ್ಷಣ ಕರ್ನಾಟಕ
ಬೆಂಗಳೂರು

| 2018-19 ರಿಂದ 2025 ರವರಗಿನ ಕೆ.ಪಿ.ಎಸ್. ಶಾಲೆಗಳು | | | |
|---|---|---|---|
| ಕ್ರಮಸಂ | ಜಿಲ್ಲೆ | ತಾಲ್ಲೂಕು | ಶಾಲೆಯ ಹೆಸರು |
| 1 | Tumkur | C.N.HALLI | KPS HULIYARKENKERE |
| 2 | Tumkur | GUBBI | KPS KADABA |
| 3 | Tumkur | GUBBI | KPS CS PURA |
| 4 | Tumkur | KUNIGAL | KPS HULIYURDURGA |
| 5 | Tumkur | KUNIGAL | KPS AMRUTHUR |
| 6 | Tumkur | TIPTUR | KPS HONNAVALLI |
| 7 | Tumkur | TIPTUR | KPS NONAVINAKERE |
| 8 | Tumkur | TUMKUR | KPS NAGAVALLI |
| 9 | Tumkur | TUMKUR | KPS EMPRESS |
| 10 | Tumkur | TUMKUR | KPS BELLAVI |
| 11 | Tumkur | TURUVEKERE | KPS DANDINASHIRVARA |

| 2025 ರ ಹೊಸ ಕೆ.ಪಿ.ಎಸ್ ಶಾಲೆಗಳು | | | |
|---|---|---|---|
| ಕ್ರಮಸಂ | ಜಿಲ್ಲೆ | ತಾಲ್ಲೂಕು | ಶಾಲೆಯ ಹೆಸರು |
| 1 | **TUMAKURU** | **GKBMS KUNIGAL TOWN** | **MAHATHMAGANDHI GOVT PU COLLEGE** |
| 2 | **TUMAKURU** | **YEDIYUR** | **GHPS DODDAMADURE/ GHS DODDAMADURE** |
| 3 | **TUMAKURU** | **THAVARKERE** | **GHS THAVARKERE** |
| 4 | **TUMAKURU** | **DHABBEGHATTA** | **GHPS + GHS DHABBEGHATTA** |
| 5 | **TUMAKURU** | **TURUVEKERE PATNA** | **G J C TURUVEKERE** |
| 6 | **TUMAKURU** | **WEST EXTENSION** | **GMHPS WEST EXTENSION** |
| 7 | **TUMAKURU** | **HEGGERE** | **GHPS HEGGERE** |
| 8 | **TUMAKURU** | **HONNUDIKE** | **GJC, HIGH SCHOOL SECTION, MASKAL/GHPS MASKAL** |
| 9 | **TUMAKURU** | **HS EXTENSTION** | **GMHPS HSH EXTN** |

Digitally signed by
K VIDYA KUMARI
Date: 01-12-2025
17:50:41

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಕರ್ನಾಟಕ

'ಅ' ಪ್ರಶ್ನೆಗೆ ಉತ್ತರ

ಅನುಬಂಧ - 2

| TUMKUR(S) DIST : GOVT. SCHOOLS HAVING ENROLMENT Less than 50 (Source : SATS 25-11-2025) | | | | | | | |
|---|---|---|---|---|---|---|---|
| Sl.No. | BLOCK NAME | Primary | Primary with Upper Primary | Secondary Only | Secondary with Higher Secondary | Upper Primary only | Grand Total |
| 1 | C N HALLI | 179 | 70 | 1 | 0 | 0 | 250 |
| 2 | GUBBI | 239 | 70 | 3 | 0 | 0 | 312 |
| 3 | KUNIGAL | 188 | 87 | 11 | 1 | 0 | 287 |
| 4 | TIPTUR | 150 | 69 | 7 | 1 | 1 | 228 |
| 5 | TUMKUR | 261 | 92 | 0 | 0 | 0 | 353 |
| 6 | TURUVEKERE | 151 | 69 | 8 | 0 | 1 | 229 |
| | **TOTAL** | **1168** | **457** | **30** | **2** | **2** | **1659** |

ಉಪ-ನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ
ತುಮಕೂರು-(ದಕ್ಷಿಣ) ಜಿಲ್ಲೆ.